

ಅರುಣ ಪಿ. ಭಟ್ಟ


## ವಾರಭವಿಷ್ಯ: 27.04.2023ದಿಂದ 03.05.2023ವರೆಗೆ




ಯಾರು ಉದ್ಯೋಗವನ್ನು ಆರಂಭಿಸಬೇಕು ಎಂದಿರುತ್ತಾರೋ ಅಂಥವರಿಗೆ ಇದು ಸೂಕ್ತವಾದ ಸಮಯ. ಸರ್ಕಾರಿ ವಲಯದಲ್ಲಿ ಯಶಸ್ಸು ಪಡೆಯುವ ಅವಕಾಶ ಹೆಚ್ಚಿದೆ. ಆದರೆ ಇದಕ್ಕಾಗಿ ಹೆಚ್ಚಿನ ಪರಿಶ್ರಮ ಹಾಕಬೇಕು. ವ್ಯಾಪಾರ ವ್ಯವಹಾರ ಮಾಡುತ್ತಿರುವವರಿಗೆ ಲಾಭದ ಪ್ರಮಾಣ ಹೆಚ್ಚಲಿದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮ ನಡೆಸುವಿರಿ. ಶುಭದಿನ 29. ನವದುರ್ಗಾ ಆರಾಧನೆ ಮಾಡಿರಿ.




ಈವರೆಗಿನ ಸಮಸ್ಯೆಗಳು ನಿವಾರಣೆ ಆಗುತ್ತವೆ. ವಾರದ ಶುರುವಿನಲ್ಲಿ ಅದೃಷ್ಟ ನಿಮ್ಮ ಪಾಲಿಗಿರುತ್ತದೆ. ಉದ್ಯೋಗ ಸ್ಥಳದಲ್ಲೂ ನಿಮ್ಮ ಬಗ್ಗೆ ಗೌರವ ಹೆಚ್ಚುತ್ತದೆ. ಸಹೋದ್ಯೋಗಿಗಳ ಪ್ರಗತಿಗೆ ಸಹಕಾರ ನೀಡಲಿದ್ದೀರಿ. ಅಗತ್ಯ ಇರುವವರಿಗೆ ಕೆಲಸ ಕೊಡಿಸಲು ಪ್ರಯತ್ನಿಸಲಿದ್ದೀರಿ. ವಾರದ ಅಂತ್ಯಕ್ಕೆ ನಿಮ್ಮ ಆರ್ಥಿಕ ಸ್ಥಿತಿಯನ್ನು ಸರಿಪಡಿಸಿಕೊಳ್ಳಲು ಸಾಧ್ಯವಾಗುತ್ತದೆ. ಶುಭದಿನ 01. ಶ್ರೀರಾಮರಕ್ಷಾ ಸ್ತೋತ್ರ ಪಠಣ ಮಾಡಿರಿ.





ವಾರದ ಶುರು ಉತ್ತಮವಾಗಿರುತ್ತದೆ. ಆಪ್ತರ ಜತೆಗಿನ ನಿಮ್ಮ ಬಾಂಧವ್ಯಕ್ಕೆ ಇನ್ನಷ್ಟು ಗಟ್ಟಿತನ ಬರುತ್ತದೆ. ಸುಮಧುರ ಕ್ಷಣಗಳನ್ನು ಕಳೆಯಲಿದ್ದೀರಿ. ವೃತ್ತಿಪರವಾದ ಜವಾಬ್ದಾರಿಗಳನ್ನು ಪೂರೈಸುವುದಕ್ಕೆ ಹೆಚ್ಚು ಸಮಯ ಮೀಸಲಿಡಬೇಕಾಗುತ್ತದೆ. ಆರೋಗ್ಯ ಸ್ಥಿತಿ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ನಿಮ್ಮ ಸಮಾಜ ಸೇವೆ ಮೆಚ್ಚುಗೆಗೆ ಪಾತ್ರವಾಗಲಿದೆ. ಶುಭದಿನ 02. ಶಿವಕವಚ ಸ್ತುತಿಸಿರಿ.





ವಾರದ ಆರಂಭದಲ್ಲಿ ವೈವಾಹಿಕ ಜೀವನದಲ್ಲಿ ಸುಮಧುರ ಕ್ಷಣಗಳನ್ನು ಕಳೆಯಲಿದ್ದೀರಿ. ದೈಹಿಕ ಸದೃಢತೆ ಹಾಗೂ ಆರೋಗ್ಯ ಉತ್ತಮವಾಗಿ ಇರಲಿದೆ. ವ್ಯಾಪಾರ ಮಾಡುವವರಿಗೆ ಪದೋನ್ನತಿ ಇದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ಗುರಿಗಳನ್ನು ಸಾಧಿಸುತ್ತೀರಿ. ವೃತ್ತಿಪರರು ಹೆಚ್ಚು ಪರಿಶ್ರಮ ಹಾಕಿ ಕೆಲಸ ಮಾಡಲಿದ್ದೀರಿ. ಸಂಬಂಧಿಕರ ಜತೆ ಉತ್ತಮ ಬಾಂಧವ್ಯ ಇರುತ್ತದೆ. ಶುಭದಿನ 30. ಹನುಮಾನ್ ಚಾಲೀಸ್ ಓದಿರಿ.




ಕೌಟುಂಬಿಕ ವಿಷಯದಲ್ಲಿ ಉತ್ತಮವಾದ ಪ್ರಗತಿ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಉತ್ತಮ. ವಿವಾಹಿತರಾಗಿದ್ದಲ್ಲಿ ಶುಭ ಸುದ್ದಿ ಕೇಳುವ ಯೋಗಗಳಿವೆ. ಉದ್ಯೋಗಕ್ಕೆ ಸಂಬಂಧಿಸಿದ ಸಂದರ್ಶನಗಳಲ್ಲಿ ಯಶಸ್ಸು ದೊರೆಯಲಿದೆ. ಸಾರ್ವಜನಿಕ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವವರಿಗೆ ಮುಖ್ಯ ಜವಾಬ್ದಾರಿಗಳನ್ನು ವಹಿಸಲಾಗುವುದು. ಶುಭದಿನ 29. ವಿಷ್ಣು ಸಹಸ್ರನಾಮ ಪಠಿಸಿರಿ.





ಶೈಕ್ಷಣಿಕ ಕ್ಷೇತ್ರದಲ್ಲಿ ಅತ್ಯುತ್ತಮವಾದ ಪ್ರಗತಿ ಇದೆ. ನಿಮ್ಮ ಬರವಣಿಗೆ ಮತ್ತಷ್ಟು ಆಕರ್ಷಕವಾಗಲಿದೆ. ಹಣಕಾಸು ಸಮಸ್ಯೆಗಳು ಬಗೆಹರಿದು, ಸ್ಥಿರತೆ ಕಾಣಬಹುದು. ಸಂತಾನ ಅಪೇಕ್ಷಿತ ದಂಪತಿಗೆ ಶುಭ ಸುದ್ದಿ ದೊರೆಯಲಿದೆ. ವಾರದ ಮಧ್ಯ ಭಾಗದಲ್ಲಿ ನಾನಾ ಕಾರಣಗಳಿಗೆ ಚಿಂತೆ ಕಾಡುತ್ತದೆ. ಹಣಕಾಸಿನ ಖರ್ಚಿನ ವಿಚಾರದಲ್ಲಿ ಪೂರ್ವಾಪರ ಆಲೋಚಿಸಿ. ಶುಭದಿನ 30. ಸೌಂದರ್ಯ ಲಹರಿ ಪಠಿಸಿರಿ.





ವಾರದ ಶುರುವಿನಲ್ಲಿ ಉತ್ತಮ ಪ್ರಗತಿ ಇದೆ. ಉದ್ಯೋಗ ಬಯಸುವವರಿಗೆ ಉತ್ತಮ ಅವಕಾಶ ದೊರೆಯಲಿದೆ. ವೈವಾಹಿಕ ಜೀವನದಲ್ಲಿ ಸಂತೋಷ, ಸಂಭ್ರಮ ಪಡಲಿದ್ದೀರಿ. ಈ ಹಿಂದೆ ಸಂಗಾತಿ ಜತೆಗೆ ಭಿನ್ನಾಭಿಪ್ರಾಯ ಅಥವಾ ವ್ಯತ್ಯಾಸಗಳು ಇದ್ದಲ್ಲಿ ನಿವಾರಣೆ ಆಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ನಿಮ್ಮ ಬೌದ್ಧಿಕ ಸಾಮರ್ಥ್ಯ ಹೆಚ್ಚಿಸಿಕೊಳ್ಳುವತ್ತ ಶ್ರಮ ಹಾಕುತ್ತೀರಿ. ಶುಭದಿನ 28. ಕಾಲಭೈರವನ ಸೇವೆ ಮಾಡಿರಿ.





ನಿಮ್ಮ ಪ್ರೀತಿಪಾತ್ರರ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ದೊಡ್ಡ ಮಟ್ಟದ ಪ್ರಶಸ್ತಿಗೆ ಪಾತ್ರರಾಗಲಿದ್ದೀರಿ. ಉದ್ಯೋಗ ಹುಡುಕುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ವೃತ್ತಿ ಜೀವನದಲ್ಲಿ ಉತ್ತಮ ಫಲಿತಾಂಶ ದೊರೆಯಲಿದೆ. ಇಂಟರ್‌ವ್ಯೂಗಳಲ್ಲಿ ಯಶಸ್ಸು ಸಿಗಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಶುಭದಿನ 29. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.





ವಾರದ ಶುರುವಿನಲ್ಲಿ ಭೂಮಿ ಆಸ್ತಿ ವಿಚಾರದಲ್ಲಿ ಲಾಭ ಪಡೆದುಕೊಳ್ಳುವ ಅವಕಾಶ ಹೆಚ್ಚಿಗೆ ಇದೆ. ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಳ್ಳಲಿದೆ. ಕೌಟುಂಬಿಕ ವಿಚಾರದಲ್ಲಿ ಸಣ್ಣ ಪುಟ್ಟ ಸಮಸ್ಯೆಯಾದರೂ ಎದುರಾಗಲಿದೆ. ವಾರದ ದ್ವಿತೀಯಾರ್ಧದಲ್ಲಿ ರಾಜಕಾರಣದಲ್ಲಿ ಇರುವವರಿಗೆ ಪ್ರಗತಿ ಇದೆ. ಆಧ್ಯಾತ್ಮಿಕ ವಿಚಾರದ ಕಡೆಗೆ ಒಲವು ಹೆಚ್ಚಲಿದೆ. ಶುಭದಿನ 02. ಚಂಡಿ ಪಾರಾಯಣ ಮಾಡಿರಿ.




ಹಲವು ಕ್ಷೇತ್ರದಲ್ಲಿ ಅಂದುಕೊಂಡಂಥ ಫಲಿತಾಂಶವನ್ನು ಸಾಧಿಸಲಿದ್ದೀರಿ. ಆರೋಗ್ಯ ಉತ್ತಮವಾಗಿದ್ದು, ಚೈತನ್ಯದಿಂದ ಕಾಣಿಸಿಕೊಳ್ಳಲಿದ್ದೀರಿ. ಈಗಾಗಲೇ ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ಅವುಗಳಿಂದ ನಿವಾರಣೆ ಕಾಣಿಸಿಕೊಳ್ಳಲಿದೆ. ವೃತ್ತಿಪರ ಗುರಿಯನ್ನು ಮುಟ್ಟಲು ಉತ್ಸಾಹದಿಂದ ಕೆಲಸ ಮಾಡಲಿದ್ದೀರಿ. ಹಣಕಾಸಿನ ವಿಚಾರದಲ್ಲಿ ಮೇಲುಗೈ ಸಾಧಿಸಲಿದ್ದೀರಿ. ಶುಭದಿನ 03. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವ್ಯವಹಾರದಲ್ಲಿ ಹೆಚ್ಚಿನ ಪ್ರಮಾಣದ ಲಾಭ ಕಾಣುವಿರಿ. ಕಾನೂನು ವಿಚಾರದಲ್ಲಿ ಪ್ರಗತಿ. ವಾರದ ಆರಂಭದಲ್ಲಿ ಬಿಡುವಿಲ್ಲದಷ್ಟು ಕೆಲಸ. ಆರೋಗ್ಯಕ್ಕೆ ಸಂಬಂಧಿಸಿದಂತೆ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಈಗಾಗಲೇ ಇರುವ ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ಮಾರ್ಗಗಳು ಗೋಚರವಾಗುತ್ತವೆ. ಹಲವು ರೀತಿಯಲ್ಲಿ ಸಂತೋಷದ ಕ್ಷಣಗಳನ್ನು ಅನುಭವಿಸಲಿದ್ದೀರಿ. ಶುಭದಿನ 03. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ವಾರದ ಶುರುವಿನಿಂದಲೇ ಉತ್ತಮ ಫಲಿತಾಂಶ ಪಡೆಯುವಿರಿ. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಹೆಚ್ಚುವರಿ ಆದಾಯ ಮೂಲದಿಂದ ಅತ್ಯುತ್ತಮ ಪ್ರಮಾಣದ ಲಾಭವನ್ನು ನಿರೀಕ್ಷೆ ಮಾಡಬಹುದು. ನಿಮ್ಮ ಜೀವನಮಟ್ಟ ಹೆಚ್ಚಿಸಿಕೊಳ್ಳಲು ಶ್ರಮಿಸುತ್ತೀರಿ. ವಾರದ ದ್ವಿತೀಯಾರ್ಧದಲ್ಲಿ ದೊಡ್ಡ ಮಟ್ಟದ ಯಶಸ್ಸು ನಿಮ್ಮ ಪಾಲಿಗೆ ದೊರೆಯಲಿದೆ. ಶುಭದಿನ 28. ದಕ್ಷಿಣಾಮೂರ್ತಿ ಸ್ತೋತ್ರ ಪಠಣ ಮಾಡಿರಿ.